156 ಸೇಪ = (59)
LRK
030126

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಾಮೋಜಿಗೌಡ ಇವರು ನಿಯಮ 330 ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 59 ಕ್ಕೆ ಮಾನ್ಯ ಇಂಧನ ಸಚಿವರ ಉತ್ತರ:**

**ವಿಷಯ :** ಸುಪ್ರೀಂ ಕೋರ್ಟ್ ಆದೇಶಕ್ಕೂ ಮುನ್ನ ನಿರ್ಮಾಣವಾಗಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದಿರುವ ಬಗ್ಗೆ ಮತ್ತು ಸಣ್ಣ ಕೈಗಾರಿಕೆಗಳಿಗೆ ಸಿಸಿ ಮತ್ತು ಒಸಿ ಕಡ್ಡಾಯ ಮಾಡಿರುವ ಕಾರಣ ಹಲವು ಕೈಗಾರಿಕೆಗಳು ವಿದ್ಯುತ್ ಸಂಪರ್ಕದ ಕೊರತೆಯುಂಟಾಗಿ, ಉತ್ಪಾದನೆ, ಉದ್ಯೋಗ ಮತ್ತು ಸ್ಥಳೀಯ ಕಚ್ಚಾ ಸಂಪನ್ಮೂಲ ಸದುಪಯೋಗ ಪಡಿಸಿಕೊಳ್ಳಲು ಸಾಧ್ಯವಾಗದೆ ಸಮಸ್ಯೆ ಉಂಟಾಗಿದೆ ಮತ್ತು ಸುಪ್ರೀಂ ಕೋರ್ಟ್ ತೀರ್ಪಿಗೆ ಮುಂಚಿತವಾಗಿ ಅರ್ಜಿ ಸಲ್ಲಿಸಿ, ಠೇವಣಿ ಪಾವತಿಸಿರುವ ಅರ್ಜಿದಾರರಿಗೆ ವಿದ್ಯುತ್ ಸಂಪರ್ಕ ನೀಡದೆ ಇರುವುದರ ಬಗ್ಗೆ ಹಾಗೂ ಕಂದಾಯ ನಿವೇಶನ ಮತ್ತು 'ಬಿ' ಖಾತಾಗಳಿಗೆ ಸಿಸಿ ಮತ್ತು ಒಸಿ ಸಿಗದ ಕಾರಣ ವಿದ್ಯುತ್ ಸಂಪರ್ಕ ಸಿಗದೆ ಸಾರ್ವಜನಿಕರು ತೊಂದರೆಗೆ ಸಿಲುಕುತ್ತಿರುವುದರ ಬಗ್ಗೆ ಮಾನ್ಯ ಇಂಧನ ಸಚಿವರಲ್ಲಿ ಪ್ರಸ್ತಾಪಿಸಿರುವ ಬಗ್ಗೆ

*****

**ಉತ್ತರ** :-

ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಆದೇಶ ಸಂಖ್ಯೆ:14604/2024 ಮತ್ತು 14605/2024 ದಿನಾಂಕ:17.12.2024 ರಂದು ನೀಡಿರುವ ಆದೇಶದಲ್ಲಿ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡುವಾಗ ಸಕ್ರಮ / ಸ್ಥಳೀಯ ಪ್ರಾಧಿಕಾರದಿಂದ ನೀಡುವ ವಾಸಯೋಗ್ಯ / ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಅರ್ಜಿದಾರರು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ನಂ.14604/2024 para 21 (iv) ರಂತೆ ಆದೇಶವು ಈ ಕೆಳಗಿನಂತಿರುತ್ತದೆ.

> `All the necessary service connections, such as, Electricity, Water Supply, Sewerage Connection etc. shall be given by the service provider / Board to the buildings only after the production of the completion / Occupation Certificate''.

ಸದರಿ ಆದೇಶದಲ್ಲಿ ಕಟ್ಟಡ ದ ನಿರ್ಮಿತ ಪ್ರದೇಶ (Builtup area) ಭೌಗೋಳಿಕ ಸ್ಥಳ (Geographical location) ಮತ್ತು ಕಟ್ಟಡದಲ್ಲಿ ನಿರ್ವಹಿಸಲಿರುವ ಕಾರ್ಯಚಟುವಟಿಕೆ (Nature of activity in the building) ಸಂಬಂಧಿಸಿದಂತೆ ವಿನಾಯಿತಿಯನ್ನು ನೀಡಬಹುದಾದ ಕುರಿತು ಯಾವುದೇ ರೀತಿಯ ಉಲ್ಲೇಖವಿರುವುದಿಲ್ಲ.

ಮಾನ್ಯ ಕೆ.ಇ.ಆರ್.ಸಿ.ಯ ವಿದ್ಯುತ್ ಸರಬರಾಜು ನಿಯಮಗಳ ಷರತ್ತು 4.00 ರಲ್ಲಿ ಸೂಚಿಸಿರುವ ದಾಖಲೆಗಳಾದ ಸ್ವತ್ತಿನ ಮಾಲೀಕತ್ವದ ದಾಖಲೆ ಹಾಗೂ ಅರ್ಜಿದಾರರ ಗುರುತಿನ ಚೀಟಿ ಜೊತೆಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಕಟ್ಟಡಕ್ಕೆ ಸಂಬಂಧಿಸಿದ ಸಕ್ರಮ / ಸ್ಥಳೀಯ ಪ್ರಾಧಿಕಾರದಿಂದ ನೀಡುವ ವಾಸಯೋಗ್ಯ / ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಅರ್ಜಿದಾರರು ಸಲ್ಲಿಸಿದಲ್ಲಿ ವಿದ್ಯುತ್ ಸಂಪರ್ಕವನ್ನು ಕೆ.ಇ.ಆರ್.ಸಿ ನಿಯಮಾನುಸಾರ ಯಾವುದೇ ವಿಳಂಬವಿಲ್ಲದೆ ಕಲ್ಪಿಸಲಾಗುತ್ತಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ಆದೇಶವನ್ನು ಕಡ್ಡಾಯವಾಗಿ ಎಲ್ಲಾ ರಾಜ್ಯಗಳು ಪಾಲಿಸಬೇಕಿರುತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯ ದಿನಾಂಕ 17.12.2024 ರ ಆದೇಶದಲ್ಲಿ ಕಡ್ಡಾಯಗೊಳಿಸಿರುವ ಸ್ವಾಧೀನಾನುಭವ ಪ್ರಮಾಣ ಪತ್ರದ ಬಗ್ಗೆ ಕೈಗೊಂಡಿರುವ ಕ್ರಮಗಳು ಕೆಳಕಂಡಂತಿವೆ:

- ಸದರಿ ವಿಷಯದ ಕುರಿತು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಸನ್ಮಾನ್ಯ ಮುಖ್ಯಮಂತ್ರಿಗಳ, ಅಧ್ಯಕ್ಷತೆಯಲ್ಲಿ ನಡೆದ ಸಭೆಗಳಲ್ಲಿ ಕೂಲಂಕುಷವಾಗಿ ಚರ್ಚಿಸಲಾಗಿದೆ.

- ಸಚಿವ ಸಂಪುಟ ಸಭೆಯ ಅನುಮೋದನೆಯನ್ವಯ, 1200 ಚದರ ಅಡಿಗಳ ವಿಸ್ತೀರ್ಣದವರೆಗಿನ ಕೆಳಕಂಡ ಪ್ರಾಧಿಕಾರಗಳ ವ್ಯಾಪ್ತಿಯ ನಿವೇಶನಗಳಲ್ಲಿ ನಿರ್ಮಿಸಲಾಗಿರುವ ನೆಲ+2 ಅಂತಸ್ತು ಅಥವಾ ಸ್ಟಿಲ್ಟ್ (Stilt) + 3 ಅಂತಸ್ತಿನವರೆಗಿನ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ನೀಡಿರುವ ಕುರಿತು ನಗರಾಭಿವೃದ್ಧಿ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆ.

  ಗ್ರೇಟರ್ ಬೆಂಗಳೂರು ಆಡಳಿತ ವ್ಯಾಪ್ತಿ ಮತ್ತು
  ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿ

- ಸದರಿ ಆದೇಶಗಳಂತೆ, ವಿಸಕಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ.

ಸಂಖ್ಯೆ: ಎನರ್ಜಿ 214 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು